# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | (482) 419 |
| ಸದಸ್ಯರ ಹೆಸರು : | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ |
| ಉತ್ತರಿಸುವ ದಿನಾಂಕ: | 30.01.2026 |
| ಉತ್ತರಿಸುವವರು : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಈ ಹಿಂದೆ ಇದ್ದ ಸರಳೀಕೃತವಾಗಿದ್ದ "ಪಂಚತಂತ್ರ" ತಂತ್ರಾಂಶವನ್ನು ಯಾವ ಕಾರಣಕ್ಕೆ ಕೈಬಿಡಲಾಗಿದೆ: | ಪಂಚತಂತ್ರ 1.0 ತಂತ್ರಾಂಶದಲ್ಲಿ ಗ್ರಾಮ ಪಂಚಾಯತಿಗಳ ಲೆಕ್ಕಪತ್ರ ನಿರ್ವಹಣೆಯನ್ನು ಮಾನ್ಯುಯಲ್ ಆಗಿ ನಿರ್ವಹಿಸಲಾಗುತ್ತಿತ್ತು. ಹಾಗೆಯೇ, ಗ್ರಾಮ ಪಂಚಾಯತಿಗಳಲ್ಲಿ ಸಂಗ್ರಹ ಮಾಡಲಾಗುತ್ತಿದ್ದ ತೆರಿಗೆಯನ್ನು ಮಾನ್ಯುಯಲ್ ಸಂಗ್ರಹಿಸಿ, ಪಂಚತಂತ್ರ 1.0 ತಂತ್ರಾಂಶದಲ್ಲಿ ನೈಜ ಸಮಯ ಅಳವಡಿಸದೇ ಇರುವುದು ಕಂಡುಬಂದಿತ್ತು. ಇದರಿಂದಾಗಿ, ಗ್ರಾಮ ಪಂಚಾಯತಿಗಳಲ್ಲಿ ಎಷ್ಟು ತೆರಿಗೆ ವಸೂಲಾತಿ ಮಾಡಲಾಗಿದೆಯೇ ಎಂಬುದರ ಬಗ್ಗೆ ನಿಖರವಾದ ಮಾಹಿತಿಯು ಲಭ್ಯವಿದ್ದಲ್ಲ. ಗ್ರಾಮ ಪಂಚಾಯತಿಗಳಲ್ಲಿ ನಿಗಧಿತ ಅವಧಿಯಲ್ಲಿ ಗ್ರಾಮ ಪಂಚಾಯತಿ ಸಭೆ ಮತ್ತು ಗ್ರಾಮ ಸಭೆಗಳನ್ನು ನಡೆಸಲಾಗಿದೆಯೇ ಎಂಬುದರ ಬಗ್ಗೆ ನಿಖರವಾದ ಮಾಹಿತಿಯು ಲಭ್ಯವಿದ್ದಲ್ಲಿ.<br><br>ಇವೆಲ್ಲ ನ್ಯೂನ್ಯತೆಗಳನ್ನು ಸರಿಪಡಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳ ಪ್ರತಿನಿತ್ಯದ ಕಾರ್ಯಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಸೇವೆಗಳ ವಿಲೇವಾರಿಗೆ ಬೇಕಾದ ಯೋಜನೆಗಳ ಅನುಷ್ಠಾನ ಮತ್ತು ತೀರ್ಮಾನಗಳನ್ನು ಕೈಗೊಳ್ಳುವಲ್ಲಿ ಮತ್ತು ಗ್ರಾಮ ಪಂಚಾಯತಿಗಳಲ್ಲಿ 2011 ರಿಂದ ಬಳಸಲಾಗುತ್ತಿರುವ ಪಂಚತಂತ್ರ ತಂತ್ರಾಂಶವನ್ನು ಉನ್ನತೀಕರಣಗೊಳಿಸಿ, ಪಂಚತಂತ್ರ 2.0 ತಂತ್ರಾಂಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿ, ಅನುಷ್ಠಾನಗೊಳಿಸಲಾಗಿದೆ. |

| | | |
|---|---|---|
| ಆ) | "ಪಂಚತಂತ್ರ" ತಂತ್ರಾಂಶವನ್ನು ಕೈಬಿಟ್ಟು ಹೊಸ ತಂತ್ರಾಂಶವನ್ನು ಅಳವಡಿಸಿರುವುದರಿಂದ ರಾಜ್ಯದ ಜನರು ಗ್ರಾಮೀಣ ಭಾಗದಲ್ಲಿ ಗ್ರಾಮ ಪಂಚಾಯತ್ ಅಡಿಯಲ್ಲಿ ಇರುವ ಗ್ರಾಮದ ಹಿನ್ನಲೆಯ ಮಾಹಿತಿ, ಜನಪರ ಯೋಜನೆಗಳು, ಗ್ರಾಮದ ಪ್ರಗತಿಪರ ಕಾಮಗಾರಿಗಳು ಹಾಗೂ ಅಧಿಕಾರಿಗಳ ಮಾಹಿತಿಯನ್ನು ಪಡೆಯುವಲ್ಲಿ ಕಷ್ಟಕರವಾಗುತ್ತಿರುವುದು ಸರ್ಕಾರದ ಗಮನ ಬಂದಿದೆಯೇ: ಬಂದಿದ್ದಲ್ಲಿ. ಕೈಗೊಂಡ ಕ್ರಮಗಳೇನು: | ಬಂದಿರುವುದಿಲ್ಲ. |
| ಇ) | "ಪಂಚತಂತ್ರ" ತಂತ್ರಾಂಶದಲ್ಲಿ ಕರ್ನಾಟಕದ ನಕ್ಷೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ನಕ್ಷೆಯ ಎಲ್ಲಾ ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿಗಳ ಮಾಹಿತಿಯನ್ನು ಅತ್ಯಂತ ಸುಲಭವಾಗಿ ಪಡೆಯಲು ಸಹಕಾರಿಯಾಗುತ್ತಿದ್ದು ಪ್ರಸ್ತುತ ಇರುವ ತಂತ್ರಾಂಶವೂ ಬಹಳ ಕ್ಲಿಷ್ಟಕರವಾಗಿದ್ದು ಈ ತಂತ್ರಾಂಶದಿಂದಾಗಿ ಮಾಹಿತಿ ಪಡೆಯುವಲ್ಲಿ ಸಮಸ್ಯೆಯಾಗಿರುವುದರಿಂದ ಪನ: ನವೀಕೃತ "ಪಂಚತಂತ್ರ" ತಂತ್ರಾಂಶವನ್ನು ಅಳವಡಿಸಿಕೊಳ್ಳುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು: | ಸಾರ್ವಜನಿಕರು ತಮಗೆ ಅವಶ್ಯವಿರುವ ಗ್ರಾಮ ಪಂಚಾಯತಿಗಳ ವಿವಿಧ ಮಾಹಿತಿ ಮತ್ತು ವಿವರಗಳನ್ನು ಪಡೆಯಲು ಮತ್ತು ಗ್ರಾಮ ಪಂಚಾಯತಿಗಳ ಸೇವೆಗಳಿಗೆ ಅರ್ಜಿ ಸಲ್ಲಿಸಲು ಹಲವಾರು ವೆಬ್ ಸೈಟ್ ಮತ್ತು ಪೋರ್ಟಲ್ ಗಳಲ್ಲಿ ಭೇಟಿ ನೀಡಬೇಕಾಗಿತ್ತು. ಅಲ್ಲದೇ, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಎಲ್ಲಾ ಬಗೆಯ ಕುಂದುಕೊರತೆಗಳನ್ನು ದಾಖಲಿಸಿ, ನಿವಾರಣೆ ಪಡೆಯಲು ಯಾವುದೇ ನಿರ್ದಿಷ್ಟವಾದ ವೆಬ್ ಸೈಟ್ ಅಥವಾ ಪೋರ್ಟಲ್ ಗಳು ಇರುವುದಿಲ್ಲ.<br><br>ಅದುದರಿಂದ, ಸಾರ್ವಜನಿಕರಿಗೆ ಅನುಕೂಲವಾಗುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಬರುವ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ವಿವಿಧ ಮಾಹಿತಿ ಮತ್ತು ವಿವರಗಳನ್ನು ಪಡೆಯಲು, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಸೇವೆಗಳಿಗೆ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಲು, ಸಲ್ಲಿಸಿದ ಅರ್ಜಿಗಳ ಸ್ಥಿತಿಗತಿಯನ್ನು ಪರಿಶೀಲಿಸಲು ಹಾಗೂ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ದಾಖಲಿಸಲು, "ಪಂಚಮಿತ್ರ" ಎಂಬ ಒಂದೇ ವೇದಿಕೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಯಿಂದ ಅಭಿವೃದ್ಧಿ ಪಡಿಸಿ, ಅನುಷ್ಠಾನಗೊಳಿಸಲಾಗಿದೆ.<br><br>ಪ್ರಸ್ತುತ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳಿಗೂ "ಪಂಚಮಿತ್ರ" ವನ್ನು ವಿಸ್ತರಿಸಲಾಗುತ್ತಿದೆ.<br><br>ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳ ನಕ್ಷೆ ಆಧಾರದ ಮಾಹಿತಿಯನ್ನು ಒದಗಿಸುವ ಬಗ್ಗೆ ಕ್ರಮವಹಿಸಲಾಗಿದೆ. |

| | | |
|---|---|---|
| ಈ) | ಯಾವ ಕಾಲಮಿತಿಯಲ್ಲಿ ನವೀಕೃತ "ಪಂಚತಂತ್ರ" ತಂತ್ರಾಂಶವನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತದೆ? | ಮುಂದಿನ ಎರಡು ತಿಂಗಳ ಅವಧಿಯಲ್ಲಿ ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳಿಗೂ "ಪಂಚಮಿತ್ರ" ವನ್ನು ವಿಸ್ತರಿಸಲು ಹಾಗೂ ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳ ನಕ್ಷೆ ಆಧಾರದ ಮಾಹಿತಿಯನ್ನು ಒದಗಿಸುವ ಬಗ್ಗೆ ಕ್ರಮವಹಿಸಲಾಗುವುದು. |

ಸಂಖ್ಯೆ: ಗ್ರಾಅಪ/24/ಇಲಆಡಳಿತ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.